ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016–17 : ಸೆಪ್ಟೆಂಬರ್ 22, 2016

ಮಾಧ್ಯಮದವರ ನಮ್ರ ಗಮನಕ್ಕೆ

## ವಿಶೇಷ ಪತ್ರಿಕಾ ಆಮಂತ್ರಣ

ಕಾವೇರಿ ಕೊಳ್ಳದ ಪ್ರದೇಶದಲ್ಲಿ ವಸ್ತುಸ್ಥಿತಿಯನ್ನು ಮನವರಿಕೆ ಮಾಡಿಕೊಡಲು ಕಾವೇರಿ ನೀರಾವರಿ ನಿಗಮ ನಿಯಮಿತವು ಮಾಧ್ಯಮದವರಿಗಾಗಿ ಅಧ್ಯಯನ ಪ್ರವಾಸವನ್ನು ಆಯೋಜಿಸಿದೆ. ಸೆಪ್ಟೆಂಬರ್ 25 ರಂದು ಬೆಳಿಗ್ಗೆ 7–00 ಗಂಟೆಗೆ ಮುಖ್ಯಮಂತ್ರಿಯವರ ಗೃಹ ಕಚೇರಿ ಕೃಷ್ಣಾದಿಂದ ಈ ಪ್ರವಾಸವು ಪ್ರಾರಂಭವಾಗಲಿದೆ.

ಕಾವೇರಿ ಕೊಳ್ಳದ ಜಲಾಶಯಗಳು, ಅಚ್ಚುಕಟ್ಟು ಪ್ರದೇಶಗಳು, ಅಲ್ಲಿನ ಕೃಷಿ ಕ್ಷೇತ್ರದ ವಾಸ್ತವಿಕ ಚಿತ್ರಣದ ದರ್ಶನದ ಜೊತೆ ಜೊತೆಗೆ ಸ್ಥಳೀಯ ಅಧಿಕಾರಿಗಳೂ ಹಾಗೂ ರೈತರನ್ನು ಮಾಧ್ಯಮದವರು ಸಂದರ್ಶಿಸಬಹುದಾಗಿದೆ.

ಸೆಪ್ಟೆಂಬರ್ 25 ರಂದು ಯಗಚಿ ಹಾಗೂ ಹೇಮಾವತಿ ಜಲಾಶಯ ಹಾಗೂ ಅಚ್ಚುಕಟ್ಟು ಪ್ರದೇಶಗಳ ವೀಕ್ಷಣೆ. ಗೊರೂರಿನಲ್ಲಿ ವಾಸ್ತವ್ಯ.

ಸೆಪ್ಟೆಂಬರ್ 26 ರಂದು ಹಾರಂಗಿ ಹಾಗೂ ಕೃಷ್ಣರಾಜಸಾಗರ ಜಲಾಶಯ ಹಾಗೂ ಅಚ್ಚುಕಟ್ಟು ಪ್ರದೇಶಗಳ ವೀಕ್ಷಣೆ. ಬೆಂಗಳೂರಿಗೆ ವಾಪಸ್.

ಮುದ್ರಣ ಮಾಧ್ಯಮದ ಪ್ರಮುಖ ದಿನಪತ್ರಿಕೆಗಳು ಹಾಗೂ ವಿದ್ಯುನ್ಮಾನ ಮಾಧ್ಯಮದ ಪ್ರಮುಖ ಸುದ್ದಿ ವಾಹಿನಿಗಳನ್ನು ಪ್ರತಿನಿಧಿಸುವ ಮಾನ್ಯತೆ ಪಡೆದ ಪತ್ರಕರ್ತರು ಹಾಗೂ ಛಾಯಾಗ್ರಾಹಕರು ಈ ಅಧ್ಯಯನ ಪ್ರವಾಸದಲ್ಲಿ ಪಾಲ್ಗೊಳ್ಳಲು ಕೋರಲಾಗಿದೆ.

ಪ್ರವಾಸ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಮುಖ್ಯಮಂತ್ರಿಯವರ ಮಾಧ್ಯಮ ಸಮನ್ವಯಕರಾದ ಶ್ರೀ ಕೆ. ವಿ. ಪ್ರಭಾಕರ್ ಅವರನ್ನು ಸಂಚಾರಿ ದೂರವಾಣಿ ಸಂಖ್ಯೆ : 98450 84154 ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಶ್ರೀ ಕೆ. ಪಿ. ಪುಟ್ಟಸ್ವಾಮಯ್ಯ ಅವರನ್ನು ಸಂಚಾರಿ ದೂರವಾಣಿ ಸಂಖ್ಯೆ : 94808 41253 ಮೂಲಕ ಸಂಪರ್ಕಿಸಿ ಪಡೆಯಬಹುದು. ಅಲ್ಲದೆ, ಪ್ರವಾಸಕ್ಕೆ ಆಗಮಿಸುವವರ ಹೆಸರು ಹಾಗೂ ವಿವರಗಳನ್ನು ಸುದ್ದಿ ಮತ್ತು ಪತ್ರಿಕಾ ಶಾಖೆಯ ವಾರ್ತಾ ಸಹಾಯಕರಾದ ಶ್ರೀಮತಿ ಬಿ. ಜಿ. ಪೂರ್ಣಿಮಾ ಅವರಲ್ಲಿ ನೋಂದಾಯಿಸಿಕೊಳ್ಳಬಹುದು.

ನಿರ್ದೇಶಕರ ಪರವಾಗಿ

<u>**ಪತ್ರಿಕಾ ಪ್ರಕಟಣೆ**</u>

# ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯ ಮೂರನೇ ಹಂತದ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ಹಾಗೂ ನವೀಕೃತ ಕಾವೇರಿ ಅತಿಥಿಗೃಹ ಮುಖ್ಯಮಂತ್ರಿಗಳಿಂದ ಉದ್ಘಾಟನೆ

**ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ):**

ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯ ಮೂರನೇ ಹಂತದ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ವಿಧಾನ ಸೌಧದಲ್ಲಿ ಗುರುವಾರ ಚಾಲನೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಮುನ್ನ ಅರಮನೆ ರಸ್ತೆಯಲ್ಲಿ ಲೋಕೋಪಯೋಗಿ ಇಲಾಖೆಯ ನವೀಕೃತ ಕಾವೇರಿ ಅತಿಥಿ ಗೃಹದ ಉದ್ಘಾಟನೆ ನೆರವೇರಿಸಿದರು.

ರಾಜ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಖಾತೆ ಸಚಿವ ಆರ್. ವಿ ದೇಶಪಾಂಡೆ ಅವರು ರಸ್ತೆ ಅಭಿವೃದ್ಧಿ ಕಾಮಗಾರಿಗಳ ಚಾಲನಾ ಸಮಾರಂಭದಲ್ಲಿ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಯೋಜನೆ ಕುರಿತ ಕಿರು ಹೊತ್ತಿಗೆಯನ್ನು ಬಿಡುಗಡೆ ಮಾಡಿ ಮಾತನಾಡಿ ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಬಹಳಷ್ಟು ರಸ್ತೆ ಕಾಮಗಾರಿಗಳು ನಡೆದಿವೆ. ಇಂತಹ ರಸ್ತೆ ನಿರ್ಮಾಣದಿಂದ ರಾಜ್ಯದಲ್ಲಿ ಆರೋಗ್ಯ, ಶಿಕ್ಷಣ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಸರ್ಕಾರದ ಕಾರ್ಯಗಳು ಸುಲಲಿತವಾಗಿ ನಡೆಯಲಿವೆ. ಗುಣಮಟ್ಟದ ಕಾರ್ಯ ನಿರ್ವಹಿಸುವ ಮೂಲಕ ಇಲಾಖೆಯ ಅಧಿಕಾರಿಗಳು ರಾಜ್ಯ ಸರ್ಕಾರಕ್ಕೆ ಒಳ್ಳೆಯ ಹೆಸರು ತರಲಿ ಎಂದು ಅವರು ಆಶಿಸಿದರು.

ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು ಮಾತನಾಡಿ ಇಲಾಖೆಯಿಂದ ಹೊಸ ರಸ್ತೆ ನಿರ್ಮಾಣ, ರಸ್ತೆ ಅಗಲೀಕರಣ, ಸೇತುವೆ ಮತ್ತು ಸಂಪರ್ಕ ರಸ್ತೆ ನಿರ್ಮಾಣದ ಮೂಲಕ ಸಮರ್ಥ ನಿರ್ವಹಣೆ ನಡೆದಿದೆ. ರಾಜ್ಯ ಸರ್ಕಾರವು ರಸ್ತೆ ಅಭಿವೃದ್ಧಿಗೆ ಆದ್ಯತೆ ನೀಡಿದೆ. ಅದೇ ರೀತಿ ರಾಷ್ಟ್ರ ಹಾಗೂ ರಾಜ್ಯ ಹೆದ್ದಾರಿಗಳನ್ನು ಸಂಪರ್ಕಿಸುವ ರಸ್ತೆಗಳನ್ನು ನಿರ್ಮಿಸುವ ಕೊರತೆ ನೀಗುವಲ್ಲಿ ರಾಜ್ಯ ಸರ್ಕಾರ ದಕ್ಷ, ಪ್ರಾಮಾಣಿಕ ಹಾಗೂ ಗುಣಮಟ್ಟದ ಕಾರ್ಯ ನಿರ್ವಹಣೆ ಮಾಡುತ್ತಿದೆ ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಹೆಚ್. ಸಿ. ಮಹದೇವಪ್ಪ ಅವರು ರಸ್ತೆಗಳ ನಿರ್ಮಾಣದ ಮೂಲಕ ರಾಜ್ಯ ಸರ್ಕಾರವು ಸಂಪತ್ತನ್ನು ಸೃಷ್ಟಿಸುವ ಜನರನ್ನು ಬೆಸೆಯುವ, ಆರ್ಥಿಕ ಮತ್ತು ಔದ್ಯೋಗಿಕ ಚಟುವಟಿಕೆಗಳನ್ನು ಅಭಿವೃದ್ಧಿ ಪಡಿಸುವ ಕಾರ್ಯ ರಾಜ್ಯ ಸರ್ಕಾರ ಮಾಡುತ್ತಿದೆ. ಇಲಾಖೆಯ ಅಧಿಕಾರಿಗಳು ರಾಷ್ಟ್ರ ನಿರ್ಮಾಣ ಕಾರ್ಯದಲ್ಲಿ ತೊಡಗಿಸಿಕೊಳ್ಳುವ, ವೃತ್ತಿ ಕೌಶಲ್ಯದಲ್ಲಿ ತಾಂತ್ರಿಕ ಹಾಗೂ ಗುಣಮಟ್ಟಕ್ಕೆ ಆದ್ಯ ನೀಡಿ ಸುಧಾರಣೆ ಮಾಡುತ್ತಿದೆ. ಇಲಾಖೆಯ ಅಧಿಕಾರಿಗಳ ಕಾರ್ಯದಿಂದ ರಾಷ್ಟ್ರಮಟ್ಟದ ಎರಡು ಪ್ರಶಸ್ತಿಗಳನ್ನು ತಮ್ಮದಾಗಿಸಿಕೊಂಡಿದ್ದಾರೆ. ಅಲ್ಲದೆ, ಇಂಜಿನಿಯರ್ ಸಂಘದ ಪ್ರಮುಖ ಬೇಡಿಕೆಯಂತೆ ಸರ್ ಎಂ. ವಿಶ್ವೇಶ್ವರಯ್ಯನವರ ಹೆಸರಿನಲ್ಲಿ ಪ್ರಶಸ್ತಿ ಸ್ಥಾಪಿಸಿ ನೀಡಲು ಅರಂಭಿಸಲಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ 24,226 ಕಿ.ಮೀ ಉದ್ದದ ರಸ್ತೆ ಸಂಪರ್ಕ ಜಾಲವನ್ನು ಅಭಿವೃದ್ಧಿ ಹಾಗೂ ಸುಧಾರಣೆ ಮಾಡಲು ಯೋಜನೆ ರೂಪಿಸಲಾಗಿದೆ. ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆ ಮೊದಲ ಹಂತದಲ್ಲಿ 3390 ಕಿ. ಮೀ ಉದ್ದದ ರಸ್ತೆಯನ್ನು 1666 ಕೋಟಿ ರೂ. ವೆಚ್ಚದಲ್ಲಿ ಪೂರ್ಣಗೊಳಿಸಲಾಗಿದೆ.

ಅಂತೆಯೇ, ಎರಡನೇ ಹಂತದಲ್ಲಿ 3134 ಕಿ. ಮೀ ಉದ್ದದ ರಸ್ತೆಯನ್ನು 1822 ಕೋಟಿ ರೂ. ವೆಚ್ಚದಲ್ಲಿ ಪೂರ್ಣಗೊಳಿಸಿ ಒಟ್ಟಾರೆ 6524 ಕಿ. ಮೀ ಉದ್ದದ ರಸ್ತೆಯನ್ನು 3488 ಕೋಟಿ ರೂ ಮೊತ್ತದಲ್ಲಿ ಪೂರ್ಣಗೊಳಿಸಲಾಗಿದೆ ಎಂದು ಮಹದೇವಪ್ಪ ಅವರು ಹೇಳಿದರು.

ಮೂರನೇ ಹಂತದ ಅಭಿವೃದ್ಧಿ ಯೋಜನೆಯಲ್ಲಿ 4315 ಕಿ. ಮೀ ರಸ್ತೆಯನ್ನು 3500 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲು ರಾಜ್ಯ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆ. ಇದರಲ್ಲಿ ಪ್ರಸಕ್ತ ಆರ್ಥಿಕ ವರ್ಷದಲ್ಲಿ 1400 ಕಿ. ಮೀ. ರಸ್ತೆಯನ್ನು 1150 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲು ಅನುದಾನ ನಿಗಧಿ ಪಡಿಸಲಾಗಿದೆ ಎಂದು ಸಚಿವರು ವಿವರಿಸಿದರು.

ಕಳೆದ ಮೂರು ವರ್ಷಗಳಲ್ಲಿ ಉತ್ತಮ ಸೇವೆ ಸಲ್ಲಿಸಿದ ಹದಿನೇಳು ಇಂಜಿನಿಯರ್‌ಗಳಿಗೆ ಸರ್. ಎಂ. ವಿಶ್ವೇಶ್ವರಯ್ಯ ಹೆಸರಿನಲ್ಲಿ ಸ್ಥಾಪಿಸಿರುವ ಪ್ರಶಸ್ತಿಗಳನ್ನು ಸಚಿವರುಗಳು ಪ್ರದಾನ ಮಾಡಿದರು.

ಈ ಮುನ್ನ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಎಂ. ಲಕ್ಷ್ಮೀನಾರಾಯಣ ಅವರು ಸ್ವಾಗತಿಸಿದರು.

*********

**ಟಿ ಸಿ ಎಂ ಬಿ**

**<u>ಪತ್ರಿಕಾ ಪ್ರಕಟಣೆ</u>**

## ಕಾವೇರಿ ಜಲವಿವಾದ : ಮಾಜಿ ಮುಖ್ಯಮಂತ್ರಿ ಎಸ್. ಎಂ. ಕೃಷ್ಣ ಅವರೊಂದಿಗೆ ಸಿದ್ದರಾಮಯ್ಯ ಚರ್ಚೆ

**ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ):**

ಮಾಜಿ ಮುಖ್ಯಮಂತ್ರಿ ಎಸ್. ಎಂ. ಕೃಷ್ಣ ಅವರನ್ನು ಗುರುವಾರ ಬೆಳಿಗ್ಗೆ ಭೇಟಿ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾವೇರಿ ಜಲವಿವಾದ ಕುರಿತಂತೆ ಚರ್ಚೆ ನಡೆಸಿದರು.

ನಂತರ, ಮಾಧ್ಯಮದೊಂದಿಗೆ ಮಾತನಾಡಿದ ಸಿದ್ದರಾಮಯ್ಯ ಅವರು ಕಾವೇರಿ ಜಲವಿವಾದ ಕುರಿತಂತೆ ಹಿರಿಯ ನಾಯಕ ಎಸ್. ಎಂ. ಕೃಷ್ಣ ಅವರೊಡನೆ ಈವರೆಗಿನ ಎಲ್ಲಾ ಬೆಳವಣಿಗೆಗಳ ಬಗ್ಗೆ ಚರ್ಚಿಸಿ ಸಲಹೆ ಪಡೆದಿದ್ದೇನೆ. ಅಲ್ಲದೆ, ಈ ನಿಟ್ಟಿನಲ್ಲಿ ಎಲ್ಲರ ಸಹಕಾರ ಅಗತ್ಯವಾಗಿ ಬೇಕಿದೆ. ರಾಜ್ಯದ ಎಲ್ಲಾ ನಾಯಕರು ಸಹಕಾರ ನೀಡುವ ಭರವಸೆ ಇದೆ. ನಾಳೆಯ ವಿಧಾನ ಮಂಡಲದ ಅಧಿವೇಶನವಿದೆ. ಅಲ್ಲಿನ ಚರ್ಚೆಯ ನಂತರ ರಾಜ್ಯ ಸರ್ಕಾರವು ಮುಂದಿನ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು.

ಇದೇ ವಿಷಯ ಕುರಿತಂತೆ ಕೇಂದ್ರ ಜಲಸಂಪನ್ಮೂಲ ಸಚಿವೆ ಉಮಾ ಭಾರತಿ ಅವರೊಂದಿಗೆ ಮಾತುಕತೆ ನಡೆಸಲು ತಾವು ದೆಹಲಿಗೆ ತೆರಳುತ್ತಿರುವುದಾಗಿ ಅವರು ತಿಳಿಸಿದರು.

**********

**ಟಿ ಸಿ ಎಂ ಬಿ**

**ಪತ್ರಿಕಾ ಪ್ರಕಟಣೆ**

# ಕಾವೇರಿ : ನಾಳೆ ಬೆಳಿಗ್ಗೆ 11–00 ಗಂಟೆಗೆ ರಾಜ್ಯ ವಿಧಾನ ಮಂಡಲದ ಉಭಯ ಸದನಗಳ ಅಧಿವೇಶನ

**ಬೆಂಗಳೂರು, ಸೆಪ್ಟೆಂಬರ್ 22 (ಕರ್ನಾಟಕ ವಾರ್ತೆ):**

ತಮಿಳುನಾಡಿಗೆ ನೀರು ಬಿಡುಗಡೆ ಮಾಡುವಂತೆ ಸೆಪ್ಟೆಂಬರ್ 20 ರಂದು ಭಾರತ ಸರ್ವೋಚ್ಛ ನ್ಯಾಯಾಲಯವು ನೀಡಿರುವ ತೀರ್ಪಿನ ಹಿನ್ನೆಲೆಯಲ್ಲಿ, ಕಾವೇರಿ ಜಲ ವಿವಾದ ಕುರಿತು ಚರ್ಚಿಸಲು ರಾಜ್ಯ ವಿಧಾನ ಸಭೆ ಮತ್ತು ರಾಜ್ಯ ವಿಧಾನ ಪರಿಷತ್ ಸೆಪ್ಟೆಂಬರ್ 23 ರಂದು ಶುಕ್ರವಾರ ಬೆಳಿಗ್ಗೆ 11–00 ಗಂಟೆಗೆ ವಿಧಾನಸೌಧದಲ್ಲಿ ಸಮಾವೇಶಗೊಳ್ಳಲಿವೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

************

**ಟಿ ಸಿ ಎಂ ಬಿ**